# <u>ಮಂಗಳೂರು ವಿಶ್ವವಿದ್ಯಾನಿಲಯ</u>

**ದಿನಾಂಕ 06.08.2024 ರಂದು ಪೂರ್ವಾಹ್ನ ಗಂಟೆ 11.00ಕ್ಕೆ ಮಂಗಳೂರು ವಿಶ್ವವಿದ್ಯಾನಿಲಯದ ಆಡಳಿತ ಸೌಧದ ರಾಣಿ ಅಬ್ಬಕ್ಕ (ಹೊಸ ಸೆನೆಟ್) ಸಭಾಂಗಣದಲ್ಲಿ ನಡೆದ ಶೈಕ್ಷಣಿಕ ಮಂಡಳಿಯ 2024-25ನೇ ಸಾಲಿನ ದ್ವಿತೀಯ ವಿಶೇಷ ಸಾಮಾನ್ಯ ಸಭೆಯ ನಡವಳಿಗಳು.**

**ಉಪಸ್ಥಿತರು**

**ಅನುಪಸ್ಥಿತರು**

## <u>ಪ್ರಾರಂಭಿಕ</u>

ಪ್ರಾರಂಭದಲ್ಲಿ ಕುಲಸಚಿವರು ಸಭಾಧ್ಯಕ್ಷರಾದ ಮಾನ್ಯ ಕುಲಪತಿಗಳು, ವಿಶ್ವವಿದ್ಯಾನಿಲಯದ ಶಾಸನಬದ್ಧ ಅಧಿಕಾರಿಗಳನ್ನು, ಎಲ್ಲಾ ನಿಕಾಯಗಳ ಡೀನರುಗಳನ್ನು, ಅಧ್ಯಯನ ಮಂಡಳಿ ಅಧ್ಯಕ್ಷರುಗಳು, ಎಲ್ಲಾ ಸದಸ್ಯರುಗಳು, ವಿಶೇಷ ಆಹ್ವಾನಿತರು ಮತ್ತು ಮಾಧ್ಯಮ ಮಿತ್ರರನ್ನು ಸಭೆಗೆ ಸ್ವಾಗತಿಸಿ, ಸಭಾಧ್ಯಕ್ಷರಲ್ಲಿ ಸಭೆಯನ್ನು ಮುಂದುವರಿಸುವಂತೆ ಕೋರಿದರು.

ಮಾನ್ಯ ಕುಲಪತಿಯವರು ಮತ್ತೊಮ್ಮೆ ಸಭೆಯಲ್ಲಿ ನೆರೆದ ಎಲ್ಲಾ ಸದಸ್ಯರುಗಳನ್ನು ಸಭೆಗೆ ಸ್ವಾಗತಿಸಿದರು.

## <u>ಪ್ರಾಸ್ತಾವಿಕ</u>

1. ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ಅಸ್ತಿತ್ವದಲ್ಲಿರುವ ವಿವಿಧ ವಿನಿಯಮ ಮತ್ತು ಪರಿನಿಯಮಗಳನ್ನು ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಅಧಿನಿಯಮ 2000 ರ ವಿವಿಧ ಪ್ರಕರಣಗಳಿಗನುಗುಣವಾಗಿ ಸಿದ್ಧಪಡಿಸಲಾಗಿ ಜಾರಿಯಲ್ಲಿರುತ್ತದೆ.

   ಶೈಕ್ಷಣಿಕ ಮಂಡಳಿಯು ವಿಶ್ವವಿದ್ಯಾನಿಲಯಲ್ಲಿ ಪ್ರಮುಖವಾದ ಪಾತ್ರವನ್ನು ನಿರ್ವಹಿಸುತ್ತದೆ ಅಲ್ಲದೆ ಶೈಕ್ಷಣಿಕ ಗುಣಮಟ್ಟವನ್ನು ಹೆಚ್ಚಿಸಿಕೊಂಡು ವಿಶ್ವವಿದ್ಯಾನಿಲಯದ ಶೈಕ್ಷಣಿಕ ಭವಿಷ್ಯವನ್ನು ಎತ್ತಿಹಿಡಿಯುವ ಜವಾಬ್ದಾರಿಯನ್ನು ನಿರ್ವಹಿಸುತ್ತದೆ. ಶೈಕ್ಷಣಿಕ ಮಂಡಳಿ ಸಭೆಗೆ ಹಾಜರಾಗುವ ಎಲ್ಲಾ ಸದಸ್ಯರುಗಳು ಸದರಿ ಪರಿನಿಯಮದಲ್ಲಿ ಉಲ್ಲೇಖವಾಗಿರುವ ಅಂಶಗಳನ್ನು ಗಮನಿಸಿಕೊಂಡು ಕಾರ್ಯಪ್ರವೃತ್ತರಾಗಬೇಕಾಗಿ ಸಭೆಯಲ್ಲಿ ಸಲಹೆ ನೀಡಲಾಯಿತು.

2. ರಾಜ್ಯ ಶಿಕ್ಷಣ ನೀತಿಯ ಮಾರ್ಗಸೂಚಿಯಂತೆ ಪದವಿ ಕಾರ್ಯಕ್ರಮಗಳ ಪಠ್ಯಕ್ರಮಗಳನ್ನು ಕ್ಲಪ್ತ ಸಮಯದಲ್ಲಿ ತಯಾರಿಸಿ ಸಲ್ಲಿಸಿರುವ ಎಲ್ಲಾ ಪದವಿ ಕಾರ್ಯಕ್ರಮಗಳ ಅಧ್ಯಯನ ಮಂಡಳಿ ಅಧ್ಯಕ್ಷರು ಹಾಗೂ ಸದಸ್ಯರುಗಳಿಗೆ ಮತ್ತು ಎಲ್ಲಾ ನಿಕಾಯಗಳ ಡೀನರುಗಳಿಗೆ ಸಭೆಯಲ್ಲಿ ಅಭಿನಂದನೆಯನ್ನು ಸಲ್ಲಿಸಲಾಯಿತು.
3. ಶೈಕ್ಷಣಿಕ ವರ್ಷ 2023-24ನೇ ಸಾಲಿನ ಪದವಿ ಕಾರ್ಯಕ್ರಮಗಳ ದ್ವಿತೀಯ, ಚತುರ್ಥ ಮತ್ತು ಆರನೇ ಸೆಮಿಸ್ಟರುಗಳ ಪರೀಕ್ಷೆಗಳು ಈಗಾಗಲೇ ಮುಕ್ತಾಯಗೊಂಡಿದ್ದು, ಪರೀಕ್ಷಾ ಮೌಲ್ಯಮಾಪನ ಕಾರ್ಯವು ಸರಿಸುಮಾರು 65% ನಡೆದಿರುವ ಬಗ್ಗೆ ಮಾಹಿತಿಯನ್ನು ನೀಡಲಾಯಿತು.
4. ಶೈಕ್ಷಣಿಕ ವರ್ಷ 2024-25ನೇ ಸಾಲಿನ ಪದವಿ ಕಾರ್ಯಕ್ರಮಗಳ ಪ್ರಥಮ ಸೆಮಿಸ್ಟರು ತರಗತಿಗಳು ದಿನಾಂಕ 12.08.2024ರಂದು ಹಾಗೂ ಸ್ನಾತಕೋತ್ತರ ಕಾರ್ಯಕ್ರಮಗಳು ದಿನಾಂಕ 09.09.2024ರಂದು ಪ್ರಾರಂಭವಾಗಲಿರುವುದಾಗಿ ಸಭೆಗೆ ಮಾಹಿತಿಯನ್ನು ನೀಡಲಾಯಿತು.

- **ಸ್ವಾಗತ:**

I. ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯದ ಅಧಿನಿಯಮ 2000ದ ಪ್ರಕರಣ 30(1)(xiv) ರ ಪ್ರಕಾರ ಯೋಜನೆ, ಮೇಲ್ವಿಚಾರಣೆ ಮತ್ತು ಮೌಲ್ಯಮಾಪನ ಮಂಡಳಿಯ ನಿರ್ದೇಶಕರ ನೆಲೆಯಲ್ಲಿ ಶೈಕ್ಷಣಿಕ ಮಂಡಳಿಯ ಸಭೆಗೆ ಹಾಜರಾಗಿರುವ ಪ್ರೊ. ಎ.ಎಂ. ಖಾನ್, ಹಿರಿಯ ಪ್ರಾಧ್ಯಾಪಕರು, ಸ್ನಾತಕೋತ್ತರ ಇಲೆಕ್ಟ್ರಾನಿಕ್ಸ್ ವಿಭಾಗ ಇವರನ್ನು ಶೈಕ್ಷಣಿಕ ಮಂಡಳಿ ಸಭೆಗೆ ಸ್ವಾಗತಿಸಲಾಯಿತು.

- **ಕೃತಜ್ಞತೆ**

I. ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಅಧಿನಿಯಮ 2000ದ ಪ್ರಕರಣ 30 (1) (vi)ರ ಪ್ರಕಾರ ಮಂಗಳೂರು ವಿಶ್ವವಿದ್ಯಾನಿಲಯದ ಸಂಯೋಜಿತ ಕಾಲೇಜುಗಳ ಪ್ರಾಂಶುಪಾಲರ ಜೇಷ್ಠತೆ ಹಾಗೂ ಸರದಿಯ ನೆಲೆಯಲ್ಲಿ ಶೈಕ್ಷಣಿಕ ಮಂಡಳಿಗೆ ಸದಸ್ಯರಾಗಿ ನಾಮನಿರ್ದೇಶನಗೊಂಡಿದ್ದ ಶ್ರೀ ಕೃಷ್ಣ ಪ್ರಸಾದ್ ಕೆ.ಎನ್., ಪ್ರಾಂಶುಪಾಲರು, ಶ್ರೀರಾಮ ಪ್ರಥಮ ದರ್ಜೆ ಕಾಲೇಜು, ಕಲ್ಲಡ್ಕ ಇವರ ಸದಸ್ಯತ್ವದ ಅವಧಿಯು ಕೊನೆಗೊಂಡಿರುವುದರಿಂದ ಶೈಕ್ಷಣಿಕ ಮಂಡಳಿ ಸದಸ್ಯತ್ವದಿಂದ ಮುಕ್ತಗೊಳಿಸಲಾಗಿದೆ.

II. ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಅಧಿನಿಯಮ 2000ದ ಪ್ರಕರಣ 30(1)(x) ರ ಪ್ರಕಾರ ಮತ್ತು ಶೈಕ್ಷಣಿಕ ಮಂಡಳಿಗೆ ವಿದ್ಯಾರ್ಥಿ ಪ್ರತಿನಿಧಿಗಳನ್ನು ನಾಮನಿರ್ದೇಶನ ಮಾಡುವ ಪರಿನಿಯಮದ ಪ್ರಕಾರ ಮಂಗಳೂರು ವಿಶ್ವವಿದ್ಯಾನಿಲಯದ ಶೈಕ್ಷಣಿಕ ಮಂಡಳಿಗೆ ಎನ್.ಸಿ.ಸಿ, ಎನ್.ಎಸ್.ಎಸ್, ಪದವಿ ಹಾಗೂ ಸ್ನಾತಕೋತ್ತರ ಕೋಟಾಗಳಡಿ ಅರ್ಹತೆಯ ಆಧಾರದ ಮೇಲೆ ವಿದ್ಯಾರ್ಥಿ ಪ್ರತಿನಿಧಿಗಳ ನೆಲೆಯಲ್ಲಿ ಮಾನ್ಯ ಕುಲಪತಿಗಳಿಂದ ನಾಮನಿರ್ದೇಶನಗೊಂಡಿರುವ ಈ ಕೆಳಗಿನ ವಿದ್ಯಾರ್ಥಿ ಪ್ರತಿನಿಧಿಗಳ ಸದಸ್ಯತ್ವದ ಅವಧಿಯು ಕೊನೆಗೊಂಡಿರುವುದರಿಂದ ಶೈಕ್ಷಣಿಕ ಮಂಡಳಿ ಸದಸ್ಯತ್ವದಿಂದ ಮುಕ್ತಗೊಳಿಸಲಾಗಿದೆ.

1. ಕು.ಗೌತಮಿ, ವಿಶ್ವವಿದ್ಯಾನಿಲಯ ಕಾಲೇಜು, ಮಂಗಳೂರು-575001 (ಎನ್.ಸಿ.ಸಿ).
2. ಶ್ರೀ ಹೆನ್ವಿಲ್ ಅನ್ಸನ್ ವಾಲ್ಡರ್, ಶ್ರೀ ಮಹಾವೀರ ಪ್ರಥಮ ದರ್ಜೆ ಕಾಲೇಜು, ಮೂಡಬಿದ್ರಿ-574197 (ಎನ್.ಎಸ್.ಎಸ್.).
3. ಕು. ದಿವ್ಯಾ, ಡಾ.ಬಿ.ಬಿ. ಹೆಗ್ಡೆ ಪ್ರಥಮ ದರ್ಜೆ ಕಾಲೇಜು, ಕುಂದಾಪುರ (ಕ್ರೀಡೆ).
4. ಕು.ಕೆ.ವರ್ಷ, ಸ್ನಾತಕೋತ್ತರ ಸಂಖ್ಯಾಶಾಸ್ತ್ರ ವಿಭಾಗ, ಮಂಗಳೂರು ವಿಶ್ವವಿದ್ಯಾನಿಲಯ, ಮಂಗಳಗಂಗೋತ್ರಿ (ಸ್ನಾತಕೋತ್ತರ).
5. ಕು.ಜಾಯ್ಲಿನ್ ಅನಿಶಾ ಫೆರ್ನಾಂಡಿಸ್, ತೃತೀಯ ಬಿ.ಕಾಂ., ಶ್ರೀ ಮಹಾವೀರ ಪ್ರಥಮ ದರ್ಜೆ ಕಾಲೇಜು, ಮೂಡಬಿದ್ರೆ-574197 (ಸ್ನಾತಕ).

**III.** ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಅಧಿನಿಯಮ 2000ದ ಪ್ರಕರಣ 30(1)(xiv) ರ ಪ್ರಕಾರ ಮತ್ತು ಶೈಕ್ಷಣಿಕ ಮಂಡಳಿಗೆ ಯೋಜನೆ, ಮೇಲ್ವಿಚಾರಣೆ ಮತ್ತು ಮೌಲ್ಯಮಾಪನ ಮಂಡಳಿಯ ನಿರ್ದೇಶಕರ ನೆಲೆಯಲ್ಲಿ ಶೈಕ್ಷಣಿಕ ಮಂಡಳಿ ಸಭೆಗಳಿಗೆ ಸದಸ್ಯರಾಗಿ ನಾಮನಿರ್ದೇಶನಗೊಂಡಿದ್ದ ಡಾ.ಮಂಜಯ್ಯ.ಡಿ.ಹೆಚ್., ಹಿರಿಯ ಪ್ರಾಧ್ಯಾಪಕರು, ಸ್ನಾತಕೋತ್ತರ ಗಣಕವಿಜ್ಞಾನ ವಿಭಾಗ, ಮಂಗಳೂರು ವಿಶ್ವವಿದ್ಯಾನಿಲಯ ಇವರನ್ನು ಯೋಜನೆ, ಮೇಲ್ವಿಚಾರಣೆ ಮತ್ತು ಮೌಲ್ಯಮಾಪನ ಮಂಡಳಿಯ ನಿರ್ದೇಶಕರ ಹುದ್ದೆಯಿಂದ ಬಿಡುಗಡೆಗೊಳಿಸಿರುವುದರಿಂದ ಇವರನ್ನು ಶೈಕ್ಷಣಿಕ ಮಂಡಳಿ ಸದಸ್ಯತ್ವದಿಂದ ಮುಕ್ತಗೊಳಿಸಲಾಗಿದೆ.

ಇವರೆಲ್ಲರೂ ಮಂಗಳೂರು ವಿಶ್ವವಿದ್ಯಾನಿಲಯದ ಸರ್ವತೋಮುಖ ಪ್ರಗತಿಗೆ ಹಾಗು ಉನ್ನತ ಶಿಕ್ಷಣ ದ ಸರ್ವಾಂಗೀಣ ಅಭಿವೃದ್ಧಿಗೆ ಪೂರಕ ಸಲಹೆ ಮತ್ತು ಸಹಕಾರಗಳನ್ನು ನೀಡಿರುವುದಕ್ಕೆ ಶೈಕ್ಷಣಿಕ ಮಂಡಳಿ ಸಭೆಯಲ್ಲಿ ಸರ್ವರಿಗೂ ಕೃತಜ್ಞತಾಪೂರ್ವಕ ಅಭಿನಂದನೆಗಳನ್ನು ಸಲ್ಲಿಸಲಾಯಿತು.

**I. ನಡವಳಿಗಳ ದೃಢೀಕರಣ**

ದಿನಾಂಕ 19.06.2024ರಂದು ನಡೆದ ಶೈಕ್ಷಣಿಕ ಮಂಡಳಿಯ 2024-25ನೇ ಸಾಲಿನ ಪ್ರಥಮ ಸಾಮಾನ್ಯ ಸಭೆಯ ನಡವಳಿಯ ದೃಢೀಕರಣ.

**-ದೃಢೀಕರಿಸಲಾಯಿತು. –**

**II. ಘನತೆವೆತ್ತ ಕುಲಾಧಿಪತಿಗಳಿಂದ ಅನುಮೋದನೆಗೊಂಡ ಪರಿನಿಯಮ / ವಿನಿಯಮಗಳು**

**-ಯಾವುದೂ ಇರುವುದಿಲ್ಲ.-**

III. **ಕುಲಪತಿಗಳು, ಸಿಂಡಿಕೇಟು, ನಿಕಾಯಗಳು ಮತ್ತು ಅಧ್ಯಯನ ಮಂಡಳಿಗಳಿಂದ ಬಂದ ಪ್ರಸ್ತಾವನೆಗಳು**

**ಕಾರ್ಯಸೂಚಿ ಸಂಖ್ಯೆ:** ಹಣಕಾಸು:ಶೈ.ಮ.ವಿ.ಸ.2:1 (2024-25)

**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯದ 2024-25ನೇ ಸಾಲಿನ ಆಯವ್ಯಯ ಅಂದಾಜುಗಳು ಮತ್ತು 2023-24ನೇ ಸಾಲಿನ ಪರಿಷ್ಕೃತ ಆಯವ್ಯಯ ಅಂದಾಜುಗಳ ಅನುಮೋದನೆ ಬಗ್ಗೆ.

**ನಿರ್ಣಯ:** ಆಯವ್ಯಯ ಅಂದಾಜುಗಳನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಹಣಕಾಸು:ಶೈ.ಮ.ವಿ.ಸ.2:2 (2024-25)

**ವಿಷಯ:** 2023-24ನೇ ಸಾಲಿನ ವಾರ್ಷಿಕ ಲೆಕ್ಕ ಪತ್ರಗಳ ಅನುಮೋದನೆಯ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಹಣಕಾಸು:ಶೈ.ಮ.ವಿ.ಸ.2:3 (2024-25)

**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯದ 2020-21ನೇ ಸಾಲಿನ ಲೆಕ್ಕ ಪರಿಶೋಧನಾ ವರದಿ -ಅನುಪಾಲನಾ ವರದಿಯ ಅನುಮೋದನೆ ಕುರಿತು.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಮ.ವಿ.ಸ.2:4 (2024-25)

**ವಿಷಯ:** ಸ್ನಾತಕೋತ್ತರ ಭೂಗೋಳಶಾಸ್ತ್ರ ಕಾರ್ಯಕ್ರಮದ ಪರಿಷ್ಕೃತ ಪಠ್ಯಕ್ರಮದ ಅನುಮೋದನೆ ಬಗ್ಗೆ.

**ನಿರ್ಣಯ:** ಪರಿಷ್ಕೃತ ಪಠ್ಯಕ್ರಮವನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಮ.ವಿ.ಸ.2:5 (2024-25)

**ವಿಷಯ:** ಸ್ನಾತಕೋತ್ತರ ಕಂಪ್ಯೂಟರ್ ಅಪ್ಲಿಕೇಷನ್ ಮತ್ತು ಕಂಪ್ಯೂಟರ್ ಸಾಯನ್ಸ್ ಕಾರ್ಯಕ್ರಮದ ಪರಿಷ್ಕೃತ ಪಠ್ಯಕ್ರಮದ ಅನುಮೋದನೆ ಬಗ್ಗೆ.

**ನಿರ್ಣಯ:** ಪರಿಷ್ಕೃತ ಪಠ್ಯಕ್ರಮವನ್ನು ಅನುಮೋದಿಸಲಾಯಿತು

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಮ.ವಿ.ಸ.2:6 (2024-25)

**ವಿಷಯ:** ಸ್ನಾತಕೋತ್ತರ ರಸಾಯನಶಾಸ್ತ್ರ ಕಾರ್ಯಕ್ರಮದ ಪರಿಷ್ಕೃತ ಪಠ್ಯಕ್ರಮದ ಅನುಮೋದನೆ ಬಗ್ಗೆ.

**ನಿರ್ಣಯ:** ಪರಿಷ್ಕೃತ ಪಠ್ಯಕ್ರಮವನ್ನು ಅನುಮೋದಿಸಲಾಯಿತು

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಮ.ವಿ.ಸ.2:7 (2024-25)

**ವಿಷಯ:** ಸ್ನಾತಕೋತ್ತರ ಸಾವಯವ ರಸಾಯನಶಾಸ್ತ್ರ ಕಾರ್ಯಕ್ರಮದ ಪರಿಷ್ಕೃತ ಪಠ್ಯಕ್ರಮದ ಅನುಮೋದನೆ ಬಗ್ಗೆ.

**ನಿರ್ಣಯ:** ಪರಿಷ್ಕೃತ ಪಠ್ಯಕ್ರಮವನ್ನು ಅನುಮೋದಿಸಲಾಯಿತು

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಮ.ವಿ.ಸ.2:8 (2024-25)

**ವಿಷಯ:** ಸ್ನಾತಕೋತ್ತರ ಯೋಗ ವಿಜ್ಞಾನ ಕಾರ್ಯಕ್ರಮದ ಪರಿಷ್ಕೃತ ಪಠ್ಯಕ್ರಮದ ಅನುಮೋದನೆ ಬಗ್ಗೆ.

**ನಿರ್ಣಯ:** ಪರಿಷ್ಕೃತ ಪಠ್ಯಕ್ರಮವನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಮ.ವಿ.ಸ.2:9 (2024-25)

**ವಿಷಯ:** ಸ್ನಾತಕೋತ್ತರ ಪ್ರಾಣಿಶಾಸ್ತ್ರ ಕಾರ್ಯಕ್ರಮದ ಪರಿಷ್ಕೃತ ಪಠ್ಯಕ್ರಮದ ಅನುಮೋದನೆ ಬಗ್ಗೆ.

**ನಿರ್ಣಯ:** ಪರಿಷ್ಕೃತ ಪಠ್ಯಕ್ರಮವನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಮ.ವಿ.ಸ.2:10 (2024-25)

**ವಿಷಯ:** ಸ್ನಾತಕೋತ್ತರ ಸಾಗರ ಭೂ ವಿಜ್ಞಾನ ಕಾರ್ಯಕ್ರಮದ ಪರಿಷ್ಕೃತ ಪಠ್ಯಕ್ರಮದ ಅನುಮೋದನೆ ಬಗ್ಗೆ.

**ನಿರ್ಣಯ:** ಪರಿಷ್ಕೃತ ಪಠ್ಯಕ್ರಮವನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಮ.ವಿ.ಸ.2:11 (2024-25)

**ವಿಷಯ:** ಸ್ನಾತಕೋತ್ತರ ಗಣಿತಶಾಸ್ತ್ರ ಕಾರ್ಯಕ್ರಮದ ಪರಿಷ್ಕೃತ ಪಠ್ಯಕ್ರಮದ ಅನುಮೋದನೆ ಬಗ್ಗೆ.

**ನಿರ್ಣಯ:** ಪರಿಷ್ಕೃತ ಪಠ್ಯಕ್ರಮವನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಮ.ವಿ.ಸ.2:12 (2024-25)

**ವಿಷಯ:** ಸ್ನಾತಕೋತ್ತರ ಜಿಯೋಇನ್ಫಾರ್‌ಮೆಟಿಕ್ಸ್ ಕಾರ್ಯಕ್ರಮದ ಪರಿಷ್ಕೃತ ಪರೀಕ್ಷಾ ಕಾರ್ಯಯೋಜನೆ ಬಗ್ಗೆ.

**ನಿರ್ಣಯ:** ಪಠ್ಯಕ್ರಮಗಳಲ್ಲಿ paper ಅನ್ನು course ಎಂಬುದಾಗಿ ನಮೂದಿಸಿಕೊಂಡು ಡೀನರ ಅನುಮೋದನೆ ಪಡೆದುಕೊಳ್ಳುವ ಷರತ್ತಿನ ಮೇರೆಗೆ ಪರಿಷ್ಕೃತ ಪಠ್ಯಕ್ರಮವನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಮ.ವಿ.ಸ.2:13 (2024-25)

**ವಿಷಯ:** ಸ್ನಾತಕೋತ್ತರ ವಸ್ತು ವಿಜ್ಞಾನ ಕಾರ್ಯಕ್ರಮದ ಪರಿಷ್ಕೃತ ಪಠ್ಯಕ್ರಮ ಮತ್ತು ವಿದ್ಯಾರ್ಥಿ ಪ್ರವೇಶಾರ್ಹತೆ ಅನುಮೋದನೆ ಬಗ್ಗೆ.

**ನಿರ್ಣಯ:** ಪರಿಷ್ಕೃತ ಪಠ್ಯಕ್ರಮವನ್ನು ಅನುಮೋದಿಸಲಾಯಿತು. ಸ್ನಾತಕೋತ್ತರ ವಸ್ತು ವಿಜ್ಞಾನ ಕಾರ್ಯಕ್ರಮದ ವಿದ್ಯಾರ್ಥಿ ಪ್ರವೇಶಾರ್ಹತೆಯ ಬಗ್ಗೆ ಸುದೀರ್ಘವಾಗಿ ಚರ್ಚಿಸಲಾಗಿ ಸಭೆಯಲ್ಲಿ ಭಿನ್ನ ಭಿನ್ನವಾದ ಅಭಿಪ್ರಾಯ ವ್ಯಕ್ತವಾದ ಹಿನ್ನೆಲೆಯಲ್ಲಿ ಅಧ್ಯಯನ ಮಂಡಳಿಯಲ್ಲಿ ಪುನರ್ ಪರಿಶೀಲಿಸಿ ಸಲ್ಲಿಸಲು ಅಧ್ಯಯನ ಮಂಡಳಿ ಅಧ್ಯಕ್ಷರಿಗೆ ಸೂಚಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಮ.ವಿ.ಸ.2:14 (2024-25)

**ವಿಷಯ:** ಕೈಗಾರಿಕಾ ರಸಾಯನಶಾಸ್ತ್ರ ಪಿ.ಹೆಚ್.ಡಿ. ಪದವಿ ಕಾರ್ಯಕ್ರಮದ ಕೋರ್ಸ್‌ವರ್ಕಿನ ಪರಿಷ್ಕೃತ ಪಠ್ಯಕ್ರಮದ ಅನುಮೋದನೆ ಬಗ್ಗೆ.

**ನಿರ್ಣಯ:** ಪಠ್ಯಕ್ರಮಗಳಲ್ಲಿ paper ಅನ್ನು course ಎಂಬುದಾಗಿ ನಮೂದಿಸಿಕೊಂಡು ಡೀನರ ಅನುಮೋದನೆ ಪಡೆದುಕೊಳ್ಳುವ ಷರತ್ತಿನ ಮೇರೆಗೆ ಪರಿಷ್ಕೃತ ಪಠ್ಯಕ್ರಮವನ್ನು ಅನುಮೋದಿಸಲಾಯಿತು.

| | |
|---|---|
| **ಕಾರ್ಯಸೂಚಿ ಸಂಖ್ಯೆ:** | ಎಸಿಸಿ:ಶೈ.ಮ.ವಿ.ಸ.2:15 (2024-25) |
| **ವಿಷಯ:** | ಸ್ನಾತಕೋತ್ತರ ವಾಣಿಜ್ಯ ಕಾರ್ಯಕ್ರಮದ ಪರಿಷ್ಕೃತ ಪಠ್ಯಕ್ರಮದ ಕಾರ್ಯಯೋಜನೆಯ ಅನುಮೋದನೆ ಬಗ್ಗೆ. |
| **ನಿರ್ಣಯ:** | ಪರಿಷ್ಕೃತ ಪಠ್ಯಕ್ರಮದ ಕಾರ್ಯಯೋಜನೆಯನ್ನು ಅನುಮೋದಿಸಲಾಯಿತು. |

| | |
|---|---|
| **ಕಾರ್ಯಸೂಚಿ ಸಂಖ್ಯೆ:** | ಎಸಿಸಿ:ಶೈ.ಮ.ವಿ.ಸ.2:16 (2024-25) |
| **ವಿಷಯ:** | ಯುಜಿಸಿ ವೃತ್ತಿ ಆಧಾರಿತ ಕಾರ್ಯಕ್ರಮದಡಿಯ ವರ್ಮಿ ಟೆಕ್ನಾಲಜಿ ಸರ್ಟಿಫಿಕೇಟು ಕೋರ್ಸಿನ ಪರಿಷ್ಕೃತ ಪಠ್ಯಕ್ರಮದ ಅನುಮೋದನೆ ಬಗ್ಗೆ. |
| **ನಿರ್ಣಯ:** | ಪರಿಷ್ಕೃತ ಪಠ್ಯಕ್ರಮವನ್ನು ಅನುಮೋದಿಸಲಾಯಿತು. ಸದರಿ ಕೋರ್ಸಿನ ಪ್ರಾಮುಖ್ಯತೆಯ ಬಗ್ಗೆ ಮಾಧ್ಯಮ ಮಿತ್ರರೊಡನೆ ಸಮಾಲೋಚಿಸಿಕೊಂಡು ಪತ್ರಿಗಳಲ್ಲಿ ಬರವಣಿಗೆಯನ್ನು ನೀಡಲು ಸೂಕ್ತ ಕ್ರಮಕೈಗೊಳ್ಳಬೇಕಾಗಿ ಅಧ್ಯಯನ ಮಂಡಳಿ ಅಧ್ಯಕ್ಷರಿಗೆ ಸೂಚಿಸಲಾಯಿತು. |

| | |
|---|---|
| **ಕಾರ್ಯಸೂಚಿ ಸಂಖ್ಯೆ:** | ಎಸಿಸಿ:ಶೈ.ಮ.ವಿ.ಸ.2:17 (2024-25) |
| **ವಿಷಯ:** | ಆರ್ಟಿಫಿಷಿಯಲ್ ಇಂಟಲಿಜನ್ಸ್ -ಇಂಟಗ್ರೇಟೆಡ್ ಪಾಸ್ಟೋರಲ್ ಸೋಶಿಯಲ್ ಕಮ್ಯೂನಿಕೇಷನ್ಸ್ ಸರ್ಟಿಫಿಕೇಟು ಕಾರ್ಯಕ್ರಮದ ಪಠ್ಯಕ್ರಮದ ಅನುಮೋದನೆ ಬಗ್ಗೆ. |
| **ನಿರ್ಣಯ:** | ಕಾರ್ಯಸೂಚಿಯ ವಿಷಯದಲ್ಲಿ ನಮೂದಿಸಲಾದ ಕಾರ್ಯಕ್ರಮದ ಶಿರೋನಾಮೆಯನ್ನು ತಿದ್ದುಪಡಿಗೊಳಿಸಲು ತಿಳಿಸಿ ಪಠ್ಯಕ್ರಮವನ್ನು ಅನುಮೋದಿಸಲಾಯಿತು. |

| | | |
|---|---|---|
| **ಕಾರ್ಯಸೂಚಿ ಸಂಖ್ಯೆ:** | ಎಸಿಸಿ:ಶೈ.ಮ.ವಿ.ಸ.2:18 (2024-25) | |
| **ವಿಷಯ:** | ರಾಷ್ಟ್ರೀಯ ಶಿಕ್ಷಣ ನೀತಿ 2020ರ ವಾಣಿಜ್ಯ ನಿಕಾಯದ ವ್ಯಾಪ್ತಿಯಡಿ ಬರುವ ಪದವಿ ಮಟ್ಟದ ಕಾರ್ಯಕ್ರಮಗಳ ಪಠ್ಯಕ್ರಮಗಳ ಅನುಮೋದನೆ ಬಗ್ಗೆ. | |
| **ನಿರ್ಣಯ:** | 1. B.Com (Accounting & Finance) (Voc) (V &VI sem) | ಅನುಮೋದಿಸಲಾಯಿತು. |
| | 2. BHM (VII & VIII Sem) | ಅನುಮೋದಿಸಲಾಯಿತು. |

| | |
|---|---|
| **ಕಾರ್ಯಸೂಚಿ ಸಂಖ್ಯೆ:** | ಎಸಿಸಿ:ಶೈ.ಮ.ವಿ.ಸ.2:19 (2024-25) |
| **ವಿಷಯ:** | ರಾಷ್ಟ್ರೀಯ ಶಿಕ್ಷಣ ನೀತಿ 2020ರ B.C.A. (Artificial Intelligence & Machine Learning) ಪದವಿ ಕಾರ್ಯಕ್ರಮದ III ಮತ್ತು IV ಸೆಮಿಸ್ಟರುಗಳ ಪಠ್ಯಕ್ರಮದ ಅನುಮೋದನೆ ಬಗ್ಗೆ. |
| **ನಿರ್ಣಯ:** | ಪಠ್ಯಕ್ರಮವನ್ನು ಅನುಮೋದಿಸಲಾಯಿತು. |

| | |
|---|---|
| **ಕಾರ್ಯಸೂಚಿ ಸಂಖ್ಯೆ:** | ಎಸಿಸಿ:ಶೈ.ಮ.ವಿ.ಸ.2:20 (2024-25) |
| **ವಿಷಯ:** | ರಾಷ್ಟ್ರೀಯ ಶಿಕ್ಷಣ ನೀತಿ 2020ರ ಬಿ.ವಿ.ಎ. ಪದವಿ ಕಾರ್ಯಕ್ರಮದ VII ಮತ್ತು VIII ಸೆಮಿಸ್ಟರ್‌ಗಳ ಪಠ್ಯಕ್ರಮಗಳ ಅನುಮೋದನೆ ಬಗ್ಗೆ. |
| **ನಿರ್ಣಯ:** | ಪಠ್ಯಕ್ರಮವನ್ನು ಅನುಮೋದಿಸಲಾಯಿತು. |

| | |
|---|---|
| **ಕಾರ್ಯಸೂಚಿ ಸಂಖ್ಯೆ:** | ಎಸಿಸಿ:ಶೈ.ಮ.ವಿ.ಸ.2:21 (2024-25) |
| **ವಿಷಯ:** | ರಾಜ್ಯ ಶಿಕ್ಷಣ ನೀತಿ ಆಯೋಗದ ಮಾರ್ಗಸೂಚಿಯನ್ವಯ ತಯಾರಿಸಿರುವ B.Com Programme in Banking Financial Services and Insurance ಮತ್ತು B.Com Programme in Logistics ಪದವಿ ಕಾರ್ಯಕ್ರಮಗಳ ಪಠ್ಯಕ್ರಮಗಳ ಅನುಮೋದನೆ ಬಗ್ಗೆ. |
| **ನಿರ್ಣಯ:** | ಪ್ರಸ್ತಾವಿತ ಕಾರ್ಯಕ್ರಮಗಳ ಪಠ್ಯಕ್ರಮವನ್ನು ಅನುಮೋದಿಸಲಾಯಿತು. ಸದರಿ ಕಾರ್ಯಕ್ರಮದ ಕಾರ್ಯಯೋಜನೆಗೆ ಸಂಬಂಧಿಸಿದಂತೆ ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತು, ಬೆಂಗಳೂರು ಇಲ್ಲಿನ ಆಡಳಿತಾಧಿಕಾರಿಯವರೊಂದಿಗೆ ಸಮಾಲೋಚಿಸಿಕೊಂಡು ಕಾರ್ಯಯೋಜನೆಯಲ್ಲಿರುವ ವ್ಯತ್ಯಾಸಗಳನ್ನು ಸರಿಪಡಿಸಲು ಸೂಕ್ತ ಕ್ರಮಕೈಗೊಳ್ಳಬೇಕಾಗಿ ಅಧ್ಯಯನ ಮಂಡಳಿ ಅಧ್ಯಕ್ಷರಿಗೆ ಸಲಹೆ ನೀಡಲಾಯಿತು. |

| | |
|---|---|
| **ಕಾರ್ಯಸೂಚಿ ಸಂಖ್ಯೆ:** | ಎಸಿಸಿ:ಶೈ.ಮ.ವಿ.ಸ.2:22 (2024-25) |
| **ವಿಷಯ:** | ರಾಜ್ಯ ಶಿಕ್ಷಣ ನೀತಿ ಆಯೋಗದ ಮಾರ್ಗಸೂಚಿಯನ್ವಯ ತಯಾರಿಸಿರುವ ವಿಜ್ಞಾನ ಮತ್ತು ತಂತ್ರಜ್ಞಾನ ನಿಕಾಯದ ವ್ಯಾಪ್ತಿಯಡಿ ಬರುವ ಪದವಿ ಕಾರ್ಯಕ್ರಮಗಳ ಪಠ್ಯಕ್ರಮಗಳ ಅನುಮೋದನೆ ಬಗ್ಗೆ.<br>**ಪದವಿ** |

| | | |
|---|---|---|
| ನಿರ್ಣಯ: | 1.B.Sc. (Home Science) (I-IV Sem.) | ಪಠ್ಯಕ್ರಮವನ್ನು ಅನುಮೋದಿಸಲಾಯಿತು |
| | 2. B.Sc.(Food Technology) (I-II Sem.) | ಪಠ್ಯಕ್ರಮವನ್ನು ಅನುಮೋದಿಸಲಾಯಿತು. |
| | 3.B.Sc. (Interior Design & Decoration) (I-VI Sem.) | ಪಠ್ಯಕ್ರಮವನ್ನು ಅನುಮೋದಿಸಲಾಯಿತು. |
| | 4. B.Sc. (Fashion Design) (I-II Sem.) | ಪಠ್ಯಕ್ರಮವನ್ನು ಅನುಮೋದಿಸಲಾಯಿತು. |
| | 5. B.Sc. (Food Nutrition and Dietetics) | ಪಠ್ಯಕ್ರಮವನ್ನು ಅನುಮೋದಿಸಲಾಯಿತು. |
| | 6.B.Sc.(Yogic Science) (I-IV Sem) | ಪಠ್ಯಕ್ರಮವನ್ನು ಅನುಮೋದಿಸಲಾಯಿತು. |
| | 7.B.Sc. (Hospitality Science) (I-II Sem) | ಪಠ್ಯಕ್ರಮವನ್ನು ಅನುಮೋದಿಸಲಾಯಿತು. |
| | 8. BCA (I-II sem) | ಪಠ್ಯಕ್ರಮವನ್ನು ಅನುಮೋದಿಸಲಾಯಿತು. |
| | 9. BCA (Data Analytics) (I-II Sem) | ಪಠ್ಯಕ್ರಮವನ್ನು ಅನುಮೋದಿಸಲಾಯಿತು. |
| | 10.BCA (Artificial Intelligence & Machine Learning) (I-II Sem) | ಪಠ್ಯಕ್ರಮವನ್ನು ಅನುಮೋದಿಸಲಾಯಿತು. |
| | 11. B.Sc. (Animation & Visual Effects) (I-II Sem) | ಪಠ್ಯಕ್ರಮವನ್ನು ಅನುಮೋದಿಸಲಾಯಿತು. |

**ಬಿ.ಎಸ್ಸಿ. ಪದವಿ ಕಾರ್ಯಕ್ರಮದ ಕೋರ್ ಕೋರ್ಸುಗಳು:**

| | | |
|---|---|---|
| 12. | Biochemistry (I-II Sem) | ಪಠ್ಯಕ್ರಮವನ್ನು ಅನುಮೋದಿಸಲಾಯಿತು. |
| 13. | Biotechnology (I-VI sem) | ಪಠ್ಯಕ್ರಮವನ್ನು ಅನುಮೋದಿಸಲಾಯಿತು. |
| 14. | Botany (I-VI sem) | ಪಠ್ಯಕ್ರಮವನ್ನು ಅನುಮೋದಿಸಲಾಯಿತು. |

| | | |
|---|---|---|
| 15. | Zoology (I-VI Sem) | ಪಠ್ಯಕ್ರಮವನ್ನು ಅನುಮೋದಿಸಲಾಯಿತು. |
| 16. | Chemistry (I-II sem) | ಪಠ್ಯಕ್ರಮವನ್ನು ಅನುಮೋದಿಸಲಾಯಿತು. |
| 17. | Geography (I-IV sem) | ವಿಜ್ಞಾನ ಮತ್ತು ತಂತ್ರಜ್ಞಾನ ನಿಕಾಯದ ಸಭೆಯಲ್ಲಿ ಅನುಮೋದನೆಗೊಂಡಿರುವುದಿಲ್ಲ. |
| 18. | Philosophy (I-VI sem) | ಪಠ್ಯಕ್ರಮವನ್ನು ಅನುಮೋದಿಸಲಾಯಿತು. |
| 19. | Yogic Science (I-VI sem) | ವಿಜ್ಞಾನ ಮತ್ತು ತಂತ್ರಜ್ಞಾನ ನಿಕಾಯದ ಸಭೆಯಲ್ಲಿ ಅನುಮೋದನೆಗೊಂಡಿರುವುದಿಲ್ಲ. |
| 20. | Microbiology (I-II sem) | ಪಠ್ಯಕ್ರಮವನ್ನು ಅನುಮೋದಿಸಲಾಯಿತು. |
| 21. | Computer Science | ಪಠ್ಯಕ್ರಮವನ್ನು ಅನುಮೋದಿಸಲಾಯಿತು. |
| 22. | Mathematics (I-IV sem) | ಪಠ್ಯಕ್ರಮವನ್ನು ಅನುಮೋದಿಸಲಾಯಿತು. |
| 23. | Physics (I-II sem.) | ಪಠ್ಯಕ್ರಮವನ್ನು ಅನುಮೋದಿಸಲಾಯಿತು. |
| 24. | Psychology (I-VI sem) | ವಿಜ್ಞಾನ ಮತ್ತು ತಂತ್ರಜ್ಞಾನ ನಿಕಾಯದ ಸಭೆಯಲ್ಲಿ ಅನುಮೋದನೆಗೊಂಡಿರುವುದಿಲ್ಲ. |
| 25. | Electronics (I-II sem) | ಪಠ್ಯಕ್ರಮವನ್ನು ಅನುಮೋದಿಸಲಾಯಿತು. |
| 26. | Statistics | ಪಠ್ಯಕ್ರಮವನ್ನು ಅನುಮೋದಿಸಲಾಯಿತು. |
| 27. | Environmental Studied (Compulsory course for II Sem) | ಪಠ್ಯಕ್ರಮವನ್ನು ಅನುಮೋದಿಸಲಾಯಿತು. |

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಮ.ವಿ.ಸ.2:23 (2024-25)

**ವಿಷಯ:** ರಾಜ್ಯ ಶಿಕ್ಷಣ ನೀತಿ ಆಯೋಗದ ಮಾರ್ಗಸೂಚಿಯನ್ವಯ ತಯಾರಿಸಿರುವ ವಾಣಿಜ್ಯ ನಿಕಾಯದ ವ್ಯಾಪ್ತಿಯಡಿ ಬರುವ ಪದವಿ ಕಾರ್ಯಕ್ರಮಗಳ ಪಠ್ಯಕ್ರಮಗಳ ಅನುಮೋದನೆ ಬಗ್ಗೆ.

**ನಿರ್ಣಯ:**

| | |
|---|---|
| 1.B.Com | ಪ್ರಥಮ ಸೆಮಿಸ್ಟರಿನ ಪಠ್ಯಕ್ರಮವನ್ನು ಮಾತ್ರ ಅನುಮೋದಿಸಲಾಯಿತು. |
| 2.B.Com (office Management & Secretarial Practice) (Voc) | ಪಠ್ಯಕ್ರಮಗಳನ್ನು ಅನುಮೋದಿಸಲಾಯಿತು. |
| 3.B.Com (Tax Procedure & Practice) (Voc) | ಪಠ್ಯಕ್ರಮಗಳನ್ನು ಅನುಮೋದಿಸಲಾಯಿತು. |
| 4.B.Com(Accounting & Finance) (Voc) | ಪಠ್ಯಕ್ರಮಗಳನ್ನು ಅನುಮೋದಿಸಲಾಯಿತು. |
| 5.B.Com(Computer Applications) | ಪಠ್ಯಕ್ರಮಗಳನ್ನು ಅನುಮೋದಿಸಲಾಯಿತು. |
| 6. B.B.A | ಪಠ್ಯಕ್ರಮಗಳನ್ನು ಅನುಮೋದಿಸಲಾಯಿತು. |
| 7. B.B.A Logistics | ಪಠ್ಯಕ್ರಮಗಳನ್ನು ಅನುಮೋದಿಸಲಾಯಿತು. |
| 8.B.B.A(Occupational Health & Safety) | ಪಠ್ಯಕ್ರಮಗಳನ್ನು ಅನುಮೋದಿಸಲಾಯಿತು. |
| 9. B.B.A. (TTM) | ಪಠ್ಯಕ್ರಮಗಳನ್ನು ಅನುಮೋದಿಸಲಾಯಿತು. |
| 10. B.H.M. | ಪಠ್ಯಕ್ರಮಗಳನ್ನು ಅನುಮೋದಿಸಲಾಯಿತು. |

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಮ.ವಿ.ಸ.2:24 (2024-25)

**ವಿಷಯ:** ರಾಜ್ಯ ಶಿಕ್ಷಣ ನೀತಿ ಆಯೋಗದ ಮಾರ್ಗಸೂಚಿಯನ್ವಯ ತಯಾರಿಸಿರುವ ಕಲಾ ನಿಕಾಯದ ವ್ಯಾಪ್ತಿಯಡಿ ಬರುವ ಪದವಿ ಕಾರ್ಯಕ್ರಮಗಳ ಪಠ್ಯಕ್ರಮಗಳ ಅನುಮೋದನೆ ಬಗ್ಗೆ.

**ಪದವಿ ಕಾರ್ಯಕ್ರಮಗಳು**

| | | |
|---|---|---|
| **ನಿರ್ಣಯ:** | 1.B.A.(HRD) | ಪಠ್ಯಕ್ರಮವನ್ನು ಅನುಮೋದಿಸಲಾಯಿತು. |
| | 2. BSW | ಪಠ್ಯಕ್ರಮವನ್ನು ಅನುಮೋದಿಸಲಾಯಿತು. |

**ಬಿ.ಎ. ಪದವಿ ಕಾರ್ಯಕ್ರಮದ ಕೋರ್ ಕೋರ್ಸುಗಳು / ಭಾಷಾ ವಿಷಯಗಳು**

| | |
|---|---|
| 3. English and Additional English | ಪಠ್ಯಕ್ರಮವನ್ನು ಅನುಮೋದಿಸಲಾಯಿತು. |
| 4. Hindi | ಪಠ್ಯಕ್ರಮವನ್ನು ಅನುಮೋದಿಸಲಾಯಿತು. |
| 5. Kannada & Functional Kannada | ಪಠ್ಯಕ್ರಮವನ್ನು ಅನುಮೋದಿಸಲಾಯಿತು. |
| 6. Tulu | ಪಠ್ಯಕ್ರಮವನ್ನು ಅನುಮೋದಿಸಲಾಯಿತು |
| 7. Malayalam | ಪಠ್ಯಕ್ರಮವನ್ನು ಅನುಮೋದಿಸಲಾಯಿತು |
| 8. Manipuri | ಪಠ್ಯಕ್ರಮವನ್ನು ಅನುಮೋದಿಸಲಾಯಿತು |
| 9. Sanskrit | ಪಠ್ಯಕ್ರಮವನ್ನು ಅನುಮೋದಿಸಲಾಯಿತು |
| 10. Kodava | ಪಠ್ಯಕ್ರಮವನ್ನು ಅನುಮೋದಿಸಲಾಯಿತು. |
| 11. Konkani | ಪಠ್ಯಕ್ರಮವನ್ನು ಅನುಮೋದಿಸಲಾಯಿತು |
| 12. French | ಪಠ್ಯಕ್ರಮವನ್ನು ಅನುಮೋದಿಸಲಾಯಿತು |
| 13. History | ಪಠ್ಯಕ್ರಮವನ್ನು ಅನುಮೋದಿಸಲಾಯಿತು |
| 14. Ancient History and Archaeology | ಪಠ್ಯಕ್ರಮವನ್ನು ಅನುಮೋದಿಸಲಾಯಿತು |
| 15. Office Practice and Management | ಪಠ್ಯಕ್ರಮವನ್ನು ಅನುಮೋದಿಸಲಾಯಿತು |
| 16. Secretarial Practice | ಪಠ್ಯಕ್ರಮವನ್ನು ಅನುಮೋದಿಸಲಾಯಿತು |
| 17. Journalism | ಪಠ್ಯಕ್ರಮವನ್ನು ಅನುಮೋದಿಸಲಾಯಿತು |
| 18. Political Science | ಪಠ್ಯಕ್ರಮವನ್ನು ಅನುಮೋದಿಸಲಾಯಿತು |
| 19. Sociology | ಪಠ್ಯಕ್ರಮವನ್ನು ಅನುಮೋದಿಸಲಾಯಿತು |
| 20. TTM | ಪಠ್ಯಕ್ರಮವನ್ನು ಅನುಮೋದಿಸಲಾಯಿತು |
| 21. Economics | ಪಠ್ಯಕ್ರಮವನ್ನು ಅನುಮೋದಿಸಲಾಯಿತು |
| 22. Co-operation | ಪಠ್ಯಕ್ರಮವನ್ನು ಅನುಮೋದಿಸಲಾಯಿತು. |

| | |
|---|---|
| 23. Business Management | ಪಠ್ಯಕ್ರಮವನ್ನು ಅನುಮೋದಿಸಲಾಯಿತು |
| 24. Rural Development | ಪಠ್ಯಕ್ರಮವನ್ನು ಅನುಮೋದಿಸಲಾಯಿತು. |
| 25. Geography | ಪಠ್ಯಕ್ರಮವನ್ನು ಅನುಮೋದಿಸಲಾಯಿತು |
| 26. Philosophy | ಪಠ್ಯಕ್ರಮವನ್ನು ಅನುಮೋದಿಸಲಾಯಿತು |
| 27. Psychology | ಪಠ್ಯಕ್ರಮವನ್ನು ಅನುಮೋದಿಸಲಾಯಿತು |
| 28. Home Science | ಪಠ್ಯಕ್ರಮವನ್ನು ಅನುಮೋದಿಸಲಾಯಿತು |
| 29. Constitutional Values (compulsory course for I Sem) | ಪಠ್ಯಕ್ರಮವನ್ನು ಅನುಮೋದಿಸಲಾಯಿತು |

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಮ.ವಿ.ಸ.2:25 (2024-25)

**ವಿಷಯ:** ಬಿ.ಎಡ್.ಪದವಿ ಕಾರ್ಯಕ್ರಮಕ್ಕೆ ಸಂಬಂಧಿಸಿದ ಕರಡು ಮಾರ್ಗಸೂಚಿಯ ಅನುಮೋದನೆ ಬಗ್ಗೆ..

**ನಿರ್ಣಯ:** ಕರಡು ಮಾರ್ಗಸೂಚಿಯ ಅನುಮೋದಿಸಲಾಯಿತು. ಇತರೆ ಪದವಿ ಕಾರ್ಯಕ್ರಮಗಳಲ್ಲಿ ವಿದ್ಯಾರ್ಥಿಗಳಿಗಿರುವ ಅವಕಾಶವನ್ನು ಬಿ.ಎಡ್. ಪದವಿ ಕಾರ್ಯಕ್ರಮಗಳಲ್ಲಿಯೂ ಕಲ್ಪಿಸಿದಕ್ಕಾಗಿ ಅಧ್ಯಯನ ಮಂಡಳಿ ಅಧ್ಯಕ್ಷರಿಗೆ ಅಭಿನಂದನೆಯನ್ನು ಸಲ್ಲಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಮ.ವಿ.ಸ.2:26 (2024-25)

**ವಿಷಯ:** ಪದವಿ ಮಟ್ಟದ ಕಾರ್ಯಕ್ರಮಗಳಿಗೆ ರಾಷ್ಟ್ರೀಯ ಶಿಕ್ಷಣ ನೀತಿಯನುಸಾರ ತಯಾರಿಸಲಾದ ವಿನಿಯಮದ ಅನುಮೋದನೆ ಬಗ್ಗೆ.

**ನಿರ್ಣಯ:** ಕರಡು ವಿನಿಯಮವನ್ನು ಅನುಮೋದಿಸಲಾಗಿ, ವಿನಿಯಮವನ್ನು ಸರಕಾರಕ್ಕೆ ಸಲ್ಲಿಸಲು ಸೂಕ್ತ ಕ್ರಮಕೈಗೊಳ್ಳಬಹುದೆಂಬುದಾಗಿ ನಿರ್ಣಯಿಸಲಾಯಿತು

**ಇತರ ವಿಷಯಗಳು**:

1. ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ನಡೆಸಲಾಗುವ ಪದವಿ ಕಾರ್ಯಕ್ರಮಗಳಾದ ಬಿ.ಕಾಂ ಮತ್ತು ಬಿ.ಬಿ.ಎ. ಕಾರ್ಯಕ್ರಮಗಳಲ್ಲಿ ಅರ್ಥಶಾಸ್ತ್ರ ವಿಷಯವನ್ನು ಅಳವಡಿಸಬೇಕಾಗಿ ಉಡುಪಿ ವಿಧಾನಸಭಾ ಕ್ಷೇತ್ರದ ಶಾಸಕರು ಕುಲಪತಿಯವರಿಗೆ ಬರೆದ ಪತ್ರವನ್ನು ಸಭೆಯ ಗಮನಕ್ಕೆ ತರಲಾಯಿತು. ಈ ಬಗ್ಗೆ ಸಭೆಯಲ್ಲಿ ಸುದೀರ್ಘವಾಗಿ ಚರ್ಚಿಸಲಾಗಿ, ಸದಸ್ಯರುಗಳ ಅಭಿಪ್ರಾಯಗಳನ್ನು ಪರಿಗಣಿಸಿಕೊಂಡು ಅಂತಿಮವಾಗಿ ಕಾರ್ಯಕ್ರಮಗಳಲ್ಲಿರುವ ಕೋರ್ಸುಗಳಿಗೆ ಸಂಬಂಧಿಸಿದಂತೆ ಕಲಿಕಾ ವಿಷಯಗಳು ಒಂದಕ್ಕೊಂದು ಪೂರಕವಾಗಿರುತ್ತವೆ ಹಾಗೂ ಯಾವುದೇ ಕಲಿಕಾ ವಿಷಯಗಳನ್ನು ಕಡೆಗಣಿಸದೆ ವಿದ್ಯಾರ್ಥಿಗಳಿಗೆ ಅಂತರ್ ಶಿಸ್ತೀಯ ವಿಷಯಗಳನ್ನು ಅಧ್ಯಯನಕ್ಕೆ ನೀಡಬೇಕಾಗಿ ಸಲಹೆ ನೀಡಲಾಯಿತು. ತದನಂತರ, ಪದವಿ ಮಟ್ಟದ ವಾಣಿಜ್ಯ ಮತ್ತು ಅರ್ಥಶಾಸ್ತ್ರ ಅಧ್ಯಯನ ಮಂಡಳಿಗಳ ಅಧ್ಯಕ್ಷರು ಹಾಗೂ ಸದಸ್ಯರನ್ನೊಳಗೊಂಡಂತೆ, ಸಂಬಂಧಪಟ್ಟ ನಿಕಾಯಗಳ ಡೀನರುಗಳನ್ನು ಆಹ್ವಾನಿಸಿಕೊಂಡು ಜಂಟಿ ಸಭೆಯನ್ನು ನಡೆಸಿಕೊಂಡು ಬಿ.ಕಾಂ. ಪದವಿ ಕಾರ್ಯಕ್ರಮದ ದ್ವಿತೀಯ ಸೆಮಿಸ್ಟರಿನಲ್ಲಿ ಅರ್ಥಶಾಸ್ತ್ರ ವಿಷಯಕ್ಕೆ ಸಂಬಂಧಿಸಿದ ಒಂದು ಕೋರ್ಸನ್ನು ಸೇರ್ಪಡಿಸುವಂತೆ ಒಮ್ಮತದ ನಿರ್ಣಯವನ್ನು ಕೈಗೊಳ್ಳಬೇಕಾಗಿ ಸೂಚಿಸಲಾಯಿತು.
2. ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ನಡೆಸಲಾಗುವ ಸ್ನಾತಕೋತ್ತರ ಅಧ್ಯಯನ ವಿಭಾಗಗಳನ್ನು School Conceptಗಳಡಿ ಅಳವಡಿಸಲು ಯೋಜನೆಗಳನ್ನು ಹಾಕಿಕೊಳ್ಳಲಾಗಿರುವ ವಿಚಾರವನ್ನು ಕುಲಪತಿಯವರು ಸಭೆಗೆ ಮಾಹಿತಿ ನೀಡಿದರು.

ಕೊನೆಯದಾಗಿ, ಕುಲಸಚಿವರು ಸದಸ್ಯರುಗಳ ಸಲಹೆ ಸಹಕಾರಗಳಿಗೆ ಧನ್ಯವಾದಗಳನ್ನು ಅರ್ಪಿಸಿ, ಸಭೆಯನ್ನು ಮುಕ್ತಾಯಗೊಳಿಸಿದರು.

| | |
|---|---|
| **ಸಹಿ/-** | **ಸಹಿ/-** |
| **ಕುಲಸಚಿವರು** | **ಕುಲಪತಿಗಳು** |